ರಾಜಾಪುರ ಕಬ್ಬಿಣದ ಅದಿರು ಗಣಿ ಯೋಜನೆಯವರು ಮೆ. ಕೆ.ಎಂ.ಪಾರ್ವತಮ್ಮ ಮೈನ್ಸ್, ಗಣಿಗುತ್ತಿಗೆ ಸಂಖ್ಯೆ: 2514, ರಾಜಾಪುರ ಗ್ರಾಮ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು 61.33 ಎಕರೆ (24.82 ಹೆಕ್ಟೇರ್) ಪ್ರದೇಶದಲ್ಲಿ ವರ್ಷಕ್ಕೆ 43,000 ಟನ್‌ಗಳ ಸಾಮರ್ಥ್ಯದ ಕಬ್ಬಿಣದ ಅದಿರು ಉತ್ಪದನಾ ಗಣಿಗಾರಿಕೆಯ ಸ್ಥಾಪನೆಯ ಪ್ರಸ್ತಾವನೆಯನ್ನು ಮಾಡುವ ಉದ್ದೇಶಕ್ಕಾಗಿ (ಯೋಜನಾ ಪ್ರದೇಶದಲ್ಲಿ) ದಿನಾಂಕ: 08-04-2022 ರಂದು ಅಪರಾಹ್ನ 03.00 ಗಂಟೆಗೆ ನಡೆದ ಪರಿಸರ ಸಾರ್ವಜನಿಕ ಸಭೆಯ ನಡುವಳಿಗಳು:-

| | | |
|---|---|---|
| ಪರಿಸರ ಕುರಿತಾದ ಸಾರ್ವಜನಿಕ ಆಲಿಕೆ ಸಭೆಯ ಸ್ಥಳ | | ಉದ್ದೇಶಿತ ಯೋಜನಾ ಸ್ಥಳ<br>ಮೆ. ಕೆ.ಎಂ.ಪಾರ್ವತಮ್ಮ ಮೈನ್ಸ್,<br>ಗಣಿಗುತ್ತಿಗೆ ಸಂಖ್ಯೆ: 2514, ರಾಜಾಪುರ ಗ್ರಾಮ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ. |
| ಹಾಜರಿದ್ದ ಪರಿಸರ ಸಾರ್ವಜನಿಕ ವಿಚಾರಣಾ ಸಮಿತಿಯ ಸದಸ್ಯರುಗಳ ವಿವರ | | ಪದನಾಮ |
| 1. | ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ), ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಜಿಲ್ಲೆ | ಅಧ್ಯಕ್ಷರು |
| 3 | ಡಾ. ದೊಡ್ಡಶಾನಯ್ಯ, ಪರಿಸರ ಅಧಿಕಾರಿ & ಹಿರಿಯ ಪರಿಸರ ಅಧಿಕಾರಿಗಳು (ಪ್ರಭಾರ) ಕ.ರಾ.ಮಾ.ನಿ.ಮಂ.ಪ್ರಾದೇಶಿಕ ಕಛೇರಿ, ಬಳ್ಳಾರಿ | ಸದಸ್ಯ ಸಮಾವೇಷಕರು |
| ಹಾಜರಿದ್ದ ಇತರ ಅಧಿಕಾರಿಗಳ ವಿವರ | | |
| 1 | ಶ್ರೀ ಹನುಮಂತಪ್ಪ ಹೆಚ್. ಸಹಾಯಕ ಪರಿಸರ ಅಧಿಕಾರಿ, ಕ.ರಾ.ಮಾ.ನಿ.ಮಂ.ಪ್ರಾಕ, ಬಳ್ಳಾರಿ | |
| 2 | ಶ್ರೀ ಕೆ.ಎಂ.ಗುರುಬಸವರಾಜ, ತಹಶೀಲ್ದಾರರು, ಸಂಡೂರು | |
| ಮೆ: ಕೆ.ಎಂ.ಪಾರ್ವತಮ್ಮ ಮೈನ್ಸ್, ಉದ್ದಿಮೆಯ ವತಿಯಿಂದ ಹಾಜರಿದ್ದ ಪ್ರತಿನಿಧಿಗಳು. | | |
| 1. | ಶ್ರೀ ಸಂಜಯಕುಮಾರ್, ಜನರಲ್ ಮ್ಯಾನೇಜರ್ | |
| 2. | ಶ್ರೀ ಸುಬಾನ್ ಕೊಲ್ಲುರಮಠ್, ಮಾಲೀಕರು | |
| 3. | ಶ್ರೀ ಪ್ರತೀಕ್ ಕೊಲ್ಲುರಮಠ್, ಮಾಲೀಕರು | |
| 4. | ಶ್ರೀ ವಿನಯ ಎಂ. | |
| 5 | ಡಾ.ಕೆ.ಹೆಚ್.ಮಾದವರೆಡ್ಡಿ, ಮ್ಯಾನೇಜರ್ | |
| 6 | ಶ್ರೀ ಖಾಜಾ ಬಂದೆ ನವಾಜ್, ಎನ್ವಿರಾನ್‌ಮೆಂಟ್ ಕನ್ಸಲ್ಟೆಟೆಂಟ್, ಇಕೋಮೆನ್ | |
| 7 | ಶ್ರೀ ಸಾಗರಗೌಡ, ಮೈನಿಂಗ್ ಇಂಜಿನಿಯರ್, ಇಕೋಮೆನ್ | |
| 8 | ಶ್ರೀ ಮುರಳಿಮಾನಸ್, ಇಕೋಮೆನ್ | |
| 9 | ಶ್ರೀಮತಿ ನಜೀರನ್, ಇಕೋಮೆನ್ | |
| 10 | ಶ್ರೀ ವೆಂಕಟೇಶ್ವರಲು, ಇಕೋಮೆನ್ | |

1. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಅಧಿಕಾರಿಗಳ ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ-1** ರಲ್ಲಿ ಲಗತ್ತಿಸಲಾಗಿದೆ.
2. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಸಾರ್ವಜನಿಕರ ವಿಳಾಸ ಮತ್ತು ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ-2** ರಲ್ಲಿ ಲಗತ್ತಿಸಲಾಗಿದೆ.

**ಪೀಠಿಕೆ**

ರಾಜಾಪುರ ಕಬ್ಬಿಣದ ಅದಿರು ಗಣಿ ಯೋಜನೆಯವರು ಮೆ. ಕೆ.ಎಂ.ಪಾರ್ವತಮ್ಮ ಮೈನ್ಸ್, ಗಣಿಗುತ್ತಿಗೆ ಸಂಖ್ಯೆ: 2514, ರಾಜಾಪುರ ಗ್ರಾಮ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು 61.33 ಎಕರೆ (24.82 ಹೆಕ್ಟೇರ್) ಪ್ರದೇಶದಲ್ಲಿ ವರ್ಷಕ್ಕೆ 43,000 ಟನ್‌ಗಳ ಸಾಮರ್ಥ್ಯದ ಕಬ್ಬಿಣದ ಅದಿರು ಉತ್ಪದನಾ ಗಣಿಗಾರಿಕೆಯ ಸ್ಥಾಪನೆಯನ್ನು ಮಾಡುವ ಉದ್ದೇಶಕ್ಕಾಗಿ ಪ್ರಸ್ತಾವನೆಯನ್ನು ಮಾಡಿರುತ್ತಾರೆ.

ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ಇವರು ಪರಿಸರ (ಸಂರಕ್ಷಣೆ) ಕಾಯ್ದೆ 1986 ಅಡಿಯಲ್ಲಿ ದಿನಾಂಕ 14.09.2006 ರಲ್ಲಿ ಜಾರಿಗೊಳಿಸಿರುವ ಪರಿಸರ ಅಘಾತ ಅಧ್ಯಯನದ ಅಧಿಸೂಚನೆ (ತಿದ್ದುಪಡಿ ದಿನಾಂಕ 01.12.2009) ರನ್ವಯ ಯೋಜನಾ ಪ್ರವರ್ತಕರು ಸದರಿ ಯೋಜನೆಗೆ ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುತ್ತದೆ.

ಸದರಿ ಉದ್ದೇಶಿತ ಯೋಜನೆಯು ಮೇಲೆ ತಿಳಿಸಿದ ಅಧಿಸೂಚನೆ ಅಡಿಯಲ್ಲಿ ಒಳಪಡುವುದರಿಂದ ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುತ್ತದೆ.ಆ ಮೇರೆಗೆ ಯೋಜನಾ ಪ್ರವರ್ತಕರು ಪರಿಸರ ವಿಮೋಚನಾ ಪತ್ರವನ್ನು ಪಡೆಯಲು ರಾಜ್ಯ ಮಟ್ಟದ ಪರಿಸರ ಅಘಾತ ಅಧ್ಯಯನ ಪ್ರಾಧಿಕಾರ, ಕರ್ನಾಟಕ ಇವರು ಸದರಿ ಯೋಜನೆಯ ಟರ್ಮ್ಸ್ ಆಫ್ ರೆಫೆರೆನ್ಸ್ ಸಂಖ್ಯೆ : SEIAA 599 MIN 2021 ದಿನಾಂಕ : 19-01-2022 ರ ಷರತ್ತುಬದ್ಧ ನಿಬಂಧನೆಗಳ ಅನ್ವಯ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸುವುದು ಕಡ್ಡಾಯವಾಗಿರುತ್ತದೆ.

ಯೋಜನಾ ಪ್ರವರ್ತಕರು ಷರತ್ತುಬದ್ಧ ನಿಬಂಧನೆಗಳನ್ನು ಪಾಲಿಸುವ ಸಲುವಾಗಿ ಇಕೋಮೆನ್ ಲ್ಯಾಬರೋರೇಟರೀಸ್ ಪ್ರೈವೇಟ್ ಲಿಮಿಟೆಡ್, ಬೆಂಗಳೂರು ಇವರು ತಯಾರಿಸಿದ ಕ್ಷಿಪ್ರ ಪರಿಸರ ಆಘಾತ ಅಂದಾಜು ಅಧ್ಯಯನ ವರದಿ ಮತ್ತು ಕಾರ್ಯಕಾರಿ ಸಾರಾಂಶವನ್ನು ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಸಿದ್ಧಪಡಿಸಿ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸಿಕೊಡಲು ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು ಇವರಿಗೆ ದಿನಾಂಕ 25-01-2022 ರಂದು ಮನವಿ ಸಲ್ಲಿಸಿರುತ್ತಾರೆ.

ಯೋಜನಾ ಪ್ರವರ್ತಕರ ಸದರಿ ಮನವಿಯ ಮೇರೆಗೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ ಜಿಲ್ಲಾಧಿಕಾರಿಗಳು, ಬಳ್ಳಾರಿ ಇವರಿಗೆ ಪರಿಸರ ಸಾರ್ವಜನಿಕ ಆಲಿಕಾ ಸಭೆ ನಡೆಸಲು ಸೂಕ್ತ ದಿನಾಂಕ ಹಾಗೂ ಸಮಯವನ್ನು ನೀಡಲು ದಿನಾಂಕ 07-02-2022 ಪತ್ರದ ಮೂಲಕ ಕೋರಲಾಗಿರುತ್ತದೆ.

ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ ರವರ ಆದೇಶದನ್ವಯ ದಿನಾಂಕ: 08-04-2022 ರಂದು ಅಪರಾಹ್ನ 03.00 ಗಂಟೆಗೆ ಯೋಜನಾ ಸ್ಥಳದಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲು ಸಮ್ಮತಿ ಸೂಚಿಸಿರುತ್ತಾರೆ. ಈ ಸಭೆಗೆ ಪೂರಕವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ರಾಜ್ಯ ಮಟ್ಟದ ಪ್ರಮುಖ ದಿನ ಪತ್ರಿಕೆಗಳಾದ ವಿಜಯವಾಣಿ (ಕನ್ನಡ) ಹಾಗೂ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ (ಆಂಗ್ಲ) ಗಳಲ್ಲಿ ದಿನಾಂಕ 08-03-2022 ರಂದು ಪತ್ರಿಕಾ ಪ್ರಕಟಣೆ ಬಳ್ಳಾರಿ ಜಿಲ್ಲೆಯ ಸ್ಥಳೀಯ ದಿನಪತ್ರಿಕೆಯಾದ "ಈ ನಮ್ಮ ಕನ್ನಡ ನಾಡು" ಪತ್ರಿಕೆಯಲ್ಲಿ ಸಹ ದಿನಾಂಕ: 09-03-2022 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ ಕುರಿತಾದ ಪ್ರಕಟಣೆಯನ್ನು, ನೀಡಲಾಗಿರುತ್ತದೆ.**(ಅನುಬಂಧ-3)** ಈ ಯೋಜನೆಗೆ

ಸಂಬಂಧಿಸಿದಂತೆ ಸಾರ್ವಜನಿಕರ ಅನಿಸಿಕೆ/ಆಕ್ಷೇಪಣೆ/ಸೂಚನೆ/ಸಲಹೆ/ಅಭಿಪ್ರಾಯಗಳನ್ನು ಲಿಖಿತವಾಗಿ 30 ದಿನಗಳ ಒಳಗೆ ಸಲ್ಲಿಸಲು ಕೋರಲಾಗಿತ್ತು.

ಸದರಿ ಯೋಜನೆಗೆ ಸಂಬಂಧಿಸಿದಂತೆ ಯೋಜನಾ ಪ್ರವರ್ತಕರು ಸಲ್ಲಿಸಿದ್ದ ಕ್ಷಿಪ್ರ ಪರಿಸರ ಆಘಾತ ಅಂದಾಜು ಅಧ್ಯಯನದ ವರದಿ ಮತ್ತು ಕಾರ್ಯಕಾರಿ ಸಾರಂಶದ ಕನ್ನಡ ಮತ್ತು ಆಂಗ್ಲ ಭಾಷೆಯ ಪ್ರತಿಗಳನ್ನು ಈ ಕೆಳಕಂಡ ಸ್ಥಳಗಳಲ್ಲಿ ಸಾರ್ವಜನಿಕರ ಪರಾಮರ್ಶೆಗೆ ಇಡಲಾಗಿತ್ತು.

- ಮಾನ್ಯ ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬಳ್ಳಾರಿ,
- ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಪಂಚಾಯತ್, ಬಳ್ಳಾರಿ.
- ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಬಳ್ಳಾರಿ.
- ತಹಶೀಲ್ದಾರರ ಕಾರ್ಯಾಲಯ, ಸಂಡೂರು
- ತಾಲ್ಲೂಕು ಪಂಚಾಯತಿ ಸಂಡೂರು.
- ಗ್ರಾಮ ಪಂಚಾಯತಿ ಕಾರ್ಯಾಲಯ, ಯು.ರಾಜಾಪುರ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ
- ವಿಭಾಗಿಯ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬಳ್ಳಾರಿ.
- ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬಳ್ಳಾರಿ.
- ರಾಜ್ಯ ಮಟ್ಟದ ಪರಿಸರ ಅಘಾತ ಅಧ್ಯಯನ ಪ್ರಾಧಿಕಾರ, ಅರಣ್ಯ, ಜೀವಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
- ಸಹಾಯ ಕೇಂದ್ರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ನೆಲ ಅಂತಸ್ತು, ನಂ. 49, ಪರಿಸರ ಭವನ, ಚರ್ಚ್ ಸ್ಟ್ರೀಟ್, ಬೆಂಗಳೂರು-560001

ಸದರಿ ಪರಿಸರ ಸಾರ್ವಜನಿಕ ಸಭೆಯ ಕುರಿತು ಮೇಲೆ ತಿಳಿಸಿದ ಎಲ್ಲಾ ಇಲಾಖೆಯವರಿಗೆ ಪರಿಸರ ಸಾರ್ವಜನಿಕ ಸಭೆ ನಡೆಯುತ್ತಿರುವ ಕುರಿತು ಹಾಗೂ ಪತ್ರಿಕಾ ಪ್ರಕಟಣೆ ಬಗ್ಗೆ ದಿನಾಂಕ: 09-03-2022 ರಂದು ಮಾಹಿತಿಯನ್ನು ನೀಡಲಾಗಿರುತ್ತದೆ.

ಯೋಜನಾ ಪ್ರದೇಶದ ಸುತ್ತಮುತ್ತಲಿನ ಸಾರ್ವಜನಿಕರಿಗೆ ಉದ್ದೇಶಿತ ವಿಸ್ತರಣಾ ಘಟಕದ ಕುರಿತು ಹಾಗು ಸಾರ್ವಜನಿಕ ಆಲಿಕಾ ಸಭೆ ನಡೆಯುವ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಉದ್ದಿಮೆಯ ಸುತ್ತಮುತ್ತಲಿನ ಹಳ್ಳಿಗಳಾದ (ರಾಜಾಪುರ, ವಿಟ್ಟಲನಗರ, ನಾರಾಯಣಪೂರ, ತಿಮ್ಮಲಾಪುರ, ಮೆಟ್ರಿಕಿ, ಉಬ್ಬಲಗುಂಡಿ) ಗಳಲ್ಲಿ ಕರ ಪತ್ರಗಳನ್ನು ಹಂಚಲಾಗಿದ್ದು ಮತ್ತು ಧ್ವನಿವರ್ಧಕಗಳ ಮೂಲಕವು ಸಹ ಪ್ರಚಾರವನ್ನು ದಿನಾಂಕ 07-04-2022 ರಂದು ಮಾಡಲಾಗಿರುತ್ತದೆ. (ಛಾಯಾ ಚಿತ್ರಗಳನ್ನು ಅನುಬಂಧ-4 ರಲ್ಲಿ ಲಗತ್ತಿಸಿದೆ)

ಮಾನ್ಯ ಜಿಲ್ಲಾಧಿಕಾರಿಗಳು, ಬಳ್ಳಾರಿ ರವರ ಅಧಿಕೃತ ಜ್ಞಾಪನಾ ಪತ್ರದ ದಿನಾಂಕ 05-04-2022 .ರ ಅನ್ವಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರಿಗೆ ಅಧಿಕಾರ ನೀಡಿ ದಿನಾಂಕ : 08-04-2022 ರಂದು ನಡೆಯುವ ಪರಿಸರ ಆಲಿಕೆ ಸಭೆಯನ್ನು ನಡೆಸಲು ಆದೇಶಿಸಿರುತ್ತಾರೆ. ಸದರಿ ಜ್ಞಾಪನಾ ಪತ್ರದ ಪ್ರತಿಯನ್ನು (ಅನುಬಂಧ-5ರಂತೆ ಲಗತ್ತಿಸಿದೆ)

ಮೇಲೆ ತಿಳಿಸಿದ ಅಧಿಸೂಚನೆಯಲ್ಲಿನ ಎಲ್ಲಾ ವಿಧಿ-ವಿಧಾನಗಳನ್ನು ಕ್ರಮಬಧ್ಧವಾಗಿ ನಿಯಮಾನುಸಾರ ಪಾಲಿಸಿ ದಿನಾಂಕ 08-04-2022 ರಂದು ಅಪರಾಹ್ನ 03.00 ಗಂಟೆಗೆ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ಮಾನ್ಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಇವರ ಅಧ್ಯಕ್ಷತೆಯಲ್ಲಿ ಯೋಜನಾ ಸ್ಥಳವಾದ ದೇವಗಿರಿ ಗ್ರಾಮ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆಯಲ್ಲಿ ಪ್ರಾರಂಭಿಸಲಾಯಿತು.

**ಸಭೆಯ ನಡವಳಿಗಳು**

ಸದಸ್ಯ ಸಮಾವೇಷಕರು ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ, ಬಳ್ಳಾರಿ ಪ್ರಾದೇಶಿಕ ಕಛೇರಿಯ ಹಿರಿಯ ಪರಿಸರ ಅಧಿಕಾರಿ (ಪ್ರಭಾರ) ಹಾಗೂ ಪರಿಸರ ಅಧಿಕಾರಿಗಳಾದ ಡಾ. ದೊಡ್ಡಶಾನಯ್ಯ ಅವರು ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ), ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಅವರಿಗೆ ಸ್ವಾಗತ ಕೋರಿದರು. ಮೆ. ಕೆ.ಎಂ.ಪಾರ್ವತಮ್ಮ ಮೈನ್ಸ್ ಕಂಪನಿಯ ಪ್ರತಿನಿಧಿಗಳಿಗೆ, ಅಧಿಕಾರಿಗಳಿಗೆ, ಎಲ್ಲಾ ಸಾರ್ವಜನಿಕರಿಗೆ, ಪತ್ರಕರ್ತರಿಗೆ ಹಾಗೂ ಇತರೆ ಇಲಾಖೆಯ ಅಧಿಕಾರಿಗಳಿಗೆ ಸ್ವಾಗತ ಕೋರಿದರು ಹಾಗೂ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ಕೇಂದ್ರ ಸರ್ಕಾರ, ಇವರು ಪರಿಸರ(ಸಂರಕ್ಷಣೆ)ಕಾಯ್ದೆ, 1986 ರಡಿಯಲ್ಲಿ ದಿನಾಂಕ : 14-09-2006 ರಲ್ಲಿ ಜಾರಿಗೊಳಿಸಿರುವ ಪರಿಸರ ಅಘಾತ ಅಧ್ಯಯನದ ಅಧಿಸೂಚನೆ ಬಗ್ಗೆ ಸಂಕ್ಷಿಪ್ತವಾಗಿ ವಿವರಣೆ ನೀಡಿದರು. ಸದರಿ ಯೋಜನೆಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುವ ವಿಷಯವನ್ನು ಸಹ ಸಭೆಗೆ ತಿಳಿಸಿದರು. ಸಾರ್ವಜನಿಕ ಪರಿಸರ ಆಲಿಕೆ ಸಭೆಯ ಪೂರ್ವದಲ್ಲಿ ನಿಯಮಾನುಸಾರ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆಯನ್ನು ನೀಡಿದರು ಹಾಗೂ ಸಾರ್ವಜನಿಕ ಆಲಿಕೆಯ ಸಭೆಯ ಅಧ್ಯಕ್ಷತೆಯನ್ನು ವಹಿಸುವಂತೆ ಮತ್ತು ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಪರ ಜಿಲ್ಲಾಧಿಕಾರಿಗಳನ್ನು ಕೋರಿದರು.

ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ), ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರು ಸಭೆಯನ್ನು ಉದ್ದೇಶಿಸಿ ಯೋಜನೆಗೆ ಪರಿಸರ ಸಾರ್ವಜನಿಕ ವಿಚಾರಣೆಯನ್ನು ನಡೆಸುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು. ಪರಿಸರ ಅಘಾತ ಅಧ್ಯಯನ ಅಧಿಸೂಚನೆ ದಿನಾಂಕ: 14-09-2006 ರ ಬಗ್ಗೆ ವಿವರವಾದ ಮಾಹಿತಿಯನ್ನು ಸಭೆಯಲ್ಲಿದ್ದ ಸಾರ್ವಜನಿಕರಿಗೆ ತಿಳಿಸಿದರು ಹಾಗೂ ಪರಿಸರ ಸಾರ್ವಜನಿಕ ವಿಚಾರಣೆಯ ಅಗತ್ಯತೆಯನ್ನು ಸಂಕ್ಷಿಪ್ತವಾಗಿ ವಿವರಿಸಿದರು.

ಪ್ರಸ್ತಾವಿತ ಯೋಜನೆಯ ಪವರ್ ಪಾಯಿಂಟ್ ಪ್ರಸ್ತುತಿಯನ್ನು ನೀಡುವಂತೆ ಅವರು ಯೋಜನಾ ಪ್ರತಿಪಾದಕರಿಗೆ ಮಾಹಿತಿ ನೀಡಿದರು, ಅಲ್ಲಿ ವಿಚಾರಣೆಗೆ ಹಾಜರಿದ್ದ ಸಾರ್ವಜನಿಕರು ಪರಿಸರ ಸಮಸ್ಯೆಗಳ ಕುರಿತು ಉದ್ದೇಶಿತ ಯೋಜನೆಗೆ ತಮ್ಮ ಎಲ್ಲಾ ಅಭಿಪ್ರಾಯ/ಸಲಹೆ/ಪತ್ರಗಳನ್ನು ಯೋಜನೆಯ ಬಗ್ಗೆ ಲಿಖಿತ ಅಥವಾ ಮೌಖಿಕವಾಗಿ ಪ್ರಸ್ತುತಪಡಿಸುವಂತೆ ವಿನಂತಿಸಿಕೊಂಡರು. ಈ ನಡವಳಿಯು ಲಿಖಿತ ದಾಖಲೆ ಮತ್ತು ವಿಡಿಯೋಗ್ರಾಫಿ ಎರಡನ್ನು ಒಳಗೊಂಡಿದೆ ಎಂದು ಸಭೆಗೆ ತಿಳಿಸಿದರು.

ಅದರಂತೆ, ಮೆ: ಮೆ. ಕೆ.ಎಂ.ಪಾರ್ವತಮ್ಮ ಮೈನ್ಸ್ ಕಂಪನಿ ಪರವಾಗಿ ಶ್ರೀ ಖಾಜಾ ಬಂದೆ ನವಾಜ್, ಇಕೋಮೆನ್ ಲ್ಯಾಬರೋರೇಟರೀಸ್ ಪ್ರೈವೆಟ್ ಲಿಮಿಟೆಡ್, ಬೆಂಗಳೂರು ರವರು ತಯಾರಿಸಿರುವ ಕ್ರಿಯಾತ್ಮಕ ಸಾರಾಂಶದಲ್ಲಿ ತಿಳಿಸಿರುವ ಕ್ರಮಗಳು, ಶಬ್ಧದ ಮಟ್ಟದ ಸುಧಾರಿತ ಕ್ರಮಗಳು, ನೀರಿನ ಗುಣಮಟ್ಟ ಸುಧಾರಿತ ಕ್ರಮಗಳು, ಗಾಳಿಯ ಗುಣಮಟ್ಟ ಸುಧಾರಿತ ಕ್ರಮಗಳು, ಮಣ್ಣಿನ ಗುಣಮಟ್ಟದ ಸುಧಾರಿತ ಕ್ರಮಗಳು, ಜಮೀನಿನ ಬಳಕೆ, ಸಸ್ಸೀಕರಣ ಪೋಟೊಗಳು, ಗಣಿ ಗುತ್ತಿಗೆ ಪ್ರದೇಶದೊಳಗಿನ ರಕ್ಷಣಾತ್ಮಕ ಕ್ರಮಗಳ ಪೋಟೊ, ಪರಿಸರ

ರಕ್ಷಣೆಯ ಬಜೆಟ್ ಚಟುವಟಿಕೆಗಳನ್ನೊಳಗೊಂಡ ವಿವರಗಳನ್ನು ಪವರ್ ಪಾಯಿಂಟ್ ಮೂಲಕ ಸಭೆಗೆ ಮಂಡಿಸಿದರು ಮತ್ತು ಉದ್ದಿಮೆಯ ಸಿ.ಎಸ್.ಆರ್. ಅಡಿಯಲ್ಲಿ ತೆಗೆದುಕೊಂಡಿರುವ ವಿವಿಧ ಚಟುವಟಿಕೆಗಳನ್ನೊಳಗೊಂಡ ವಿವರಗಳನ್ನು ಪವರ್ ಪಾಯಿಂಟ್ ಮೂಲಕ ಸಭೆಗೆ ಮಂಡಿಸಿದರು.

ಸಭೆಯ ಅಧ್ಯಕ್ಷರು ಈ ಉದ್ದೇಶಿತ ಯೋಜನೆಯ ಬಗ್ಗೆ ಪರಿಸರ ಕುರಿತಾಗಿ ಯಾವುದೇಸಲಹೆ/ಅನಿಸಿಕೆ/ಅಭಿಪ್ರಾಯ/ಸೂಚನೆಗಳು ಯಾವುದಾದರೂ ಇದ್ದಲ್ಲಿ ಸಭೆಗೆ ಮಂಡಿಸುವಂತೆ ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರನ್ನು ಕೋರಿದರು.

ಆಮೇರೆಗೆ ಸಾರ್ವಜನಿಕರು ಯೋಜನೆಯ ಬಗ್ಗೆ ತಮ್ಮ ಸಲಹೆ/ಅನಿಸಿಕೆ/ಅಭಿಪ್ರಾಯ/ಸೂಚನೆಗಳನ್ನು ಈ ಕೆಳಕಂಡಂತೆ ಮಂಡಿಸಿದರು.

1) **ಶ್ರೀ ಲೋಕೇಶ್, ರಾಜಪುರ ಗ್ರಾಮ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ**-ರವರು ಮಾತನಾಡುತ್ತಾ, ಸದರಿ ಕಂಪನಿಯನ್ನು ಪ್ರಾರಂಭಿಸಲು ತಮ್ಮ ಅಭ್ಯಂತರವಿಲ್ಲ ಎಂದರು. ಪಾರ್ವತಮ್ಮ ನವರು ಎರಡು ಗ್ರಾಮಗಳಿಗೆ ಮಾದರಿಯಾಗಿರುವುದಾಗಿ ತಿಳಿಸಿದರು. ಹಳ್ಳಿಗಳಲ್ಲಿ ಯಾವುದೇ ಕಾರ್ಯಕ್ರಮಗಳು ನಡೆದರು ಸಹ ಭಾಗವಹಿಸಿ ತಮ್ಮ ಗ್ರಾಮದವರನ್ನು ಒಳ್ಳೆಯ ರೀತಿಯಿಂದ ನೋಡಿಕೊಂಡುರುವುದಾಗಿ ತಿಳಿಸಿದರು. ದಯಾಮಾಡಿ ಮೈನಿಂಗ್ ಮಾಲೀಕರಿಗೆ ಎಲ್ಲಾ ಅನುಕೂಲಗಳನ್ನು ಮಾಡಿಕೊಡಬೇಕೆಂದು ಮನವಿ ಮಾಡಿದರು.
2) **ಶ್ರೀ ಉಡೇದ ಬಸಪ್ಪ, ಉಬ್ಬಲಗುಂಡಿ ಗ್ರಾಮ**-ರವರು ಮಾತನಾಡುತ್ತಾ, ಪರಿಸರದ ಬಗ್ಗೆ ಒಂದೆರಡು ವಿಷಯಗಳ ಬಗ್ಗೆ ಮಾತನಾಡಲು ಇಚ್ಛಿಸುವುದಾಗಿ ತಿಳಿಸಿದರು. ತಮ್ಮ ಗ್ರಾಮದ ಮೂಲಕ ಸುಮಾರು 500 ಅದಿರು ಸಾಗಿಸುವ ಲಾರಿಗಳು ಸಂಚರಿಸುವುದರಿಂದ ರಸ್ತೆಯ ಅಕ್ಕಪಕ್ಕದಲ್ಲಿರುವ ಮನೆಗಳಿಗೆ ಧೂಳಿನ ಸಮಸ್ಯೆ ಉಂಟಾಗುತ್ತಿರುವುದಾಗಿ ತಿಳಿಸಿದರು. ಬೈಪಾಸ್ ರಸ್ತೆಯ ಮೂಲಕ ಅದಿರನ್ನು ಸಾಗಿಸಲು ಅನುಮತಿ ನೀಡುವಂತೆ ಜಿಲ್ಲಾಡಳಿತಕ್ಕೆ ಮನವಿ ಮಾಡಿದರು. ರಸ್ತೆಗಳು ತುಂಬಾ ಹದಗೆಟ್ಟಿದ್ದು ಅವುಗಳನ್ನು ದುರಸ್ತಿ ಮಾಡಿ ಕೊಡುವಂತೆ ಮನವಿ ಮಾಡಿದರು. ಗಣಿಗಾರಿಕೆ ಪ್ರಾರಂಭವಾದ ನಂತರ ಉಬ್ಬಲಗುಂಡಿ, ರಾಜಪುರದ ಗ್ರಾಮಸ್ಥರಿಗೆ ಗುತ್ತಿಗೆ ನೀಡುವಂತೆ ಕೋರಿದರು. ಉಬ್ಬಲಗುಂಡಿ ಮತ್ತು ರಾಜಪುರದ ನಿವಾಸಿಗಳಿಗೆ ಮೈನಿಂಗ್ ನಲ್ಲಿ ಕೆಲಸ ಮಾಡುವ ಅರ್ಹತೆ ಇದ್ದು ಅವರಿಗೆ ಕೆಲಸ ನೀಡುವಂತೆ ಮನವಿ ಮಾಡಿದರು. ಪರಿಸರವನ್ನು ಕಾಪಾಡುವ ನಿಟ್ಟಿನಲ್ಲಿ ಬೈಪಾಸ್ ರಸ್ತೆಯಲ್ಲಿ ಅದಿರನ್ನು ಸಾಗಿಸಲು ಅನುಮತಿ ನೀಡುವಂತೆ ಮತ್ತೊಮ್ಮೆ ಮನವಿ ಮಾಡಿದರು.

3) **ಶ್ರೀ ಹೆಚ್ ಬಿ ಲೋಕೇಶ್, ರಾಜಪುರ ಗ್ರಾಮ**-ರವರು ಮಾತನಾಡುತ್ತಾ, ಕೆ.ಎಂ.ಪಾರ್ವತಮ್ಮ ಕಂಪನಿಯವರು ಗಣಿಗಾರಿಕೆ ಪ್ರಾರಂಭಿಸಲು ತಮ್ಮ ಅಭ್ಯಂತರವಿಲ್ಲ ಎಂದರು. ತಾವು ಹುಟ್ಟಿದಾಗಿನಿಂದ ಮೈನಿಂಗ್ ನಡೆಯಲಿ ಅಥಾವ ಸ್ಥಗಿತಗೊಂಡಿರಲಿ ಗಣಿಮಾಲೀಕರು ಸಾರ್ವಜನಿಕರೊಂದಿಗೆ ಬೆರೆತು ಎಲ್ಲಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಸಾರ್ವಜನಿಕರಿಗೆ ಒಳ್ಳೆಯ ರೀತಿಯಲ್ಲಿ ಸ್ಪಂದಿಸುತ್ತಿರುವುದಾಗಿ ತಿಳಿಸಿದರು. ಗಣಿಗಾರಿಕೆ ಪ್ರಾರಂಭವಾಗುವುದರಿಂದ ಡ್ರೈವರ್, ಕ್ಲೀನರ್ ಮತ್ತು ಇತರೆ ಕಾರ್ಮಿಕರಿಗೆ ಉಪಯೋಗವಾಗುತ್ತದೆ ಎಂದರು. ಗಣಿಗಾರಿಕೆ ಪ್ರಾರಂಭಿಸಲು ಅವಕಾಶ ಮಾಡಿಕೊಡುವಂತೆ ಮನವಿ ಮಾಡಿದರು.

4) **ಶ್ರೀ ಕೃಷ್ಣ ಯು.ರಾಜಪುರ ಗ್ರಾಮ, ಅರಣ್ಯ ಹಕ್ಕು ಸಮಿತಿ ಅಧ್ಯಕ್ಷರು**-ರವರು ಮಾತನಾಡುತ್ತಾ, 6 ತಿಂಗಳು ಹಿಂದೆ ಸದರಿ ಗಣಿ ಪ್ರದೇಶದಲ್ಲಿ ಆರ್ & ಆರ್ ಕಾಮಗಾರಿಗಳನ್ನು ಮಾಡಿರುವುದಾಗಿ ತಿಳಿಸಿದರು. ತಮ್ಮ ಗ್ರಾಮದಲ್ಲಿ ವಿದ್ಯಾವಂತ ಯುವಕರುಗಳಿದ್ದು ಅವರಿಗೆ ಗಣಿ ಕಂಪನಿಯಿಂದ ಸಹಾಯ ಮಾಡುವಂತೆ ಗಣಿ ಮಾಲೀಕರಲ್ಲಿ ಮನವಿ ಮಾಡಿದರು.

5) **ಶ್ರೀ ಸುರೇಶ್, ಉಬ್ಬಲಗುಂಡಿ ಗ್ರಾಮ**-ರವರು ಮಾತನಾಡುತ್ತಾ, ಸುತ್ತಮುತ್ತಲ ಗ್ರಾಮದವರು ಕೆ.ಎಂ.ಪಾರ್ವತಮ್ಮ ಗಣಿ ಕಂಪನಿಯಲ್ಲಿ ಕಾರ್ಮಿಕರಾಗಿ ದುಡಿದು ಜೀವನ ಸಾಗಿಸಿರುವುದಾಗಿ ತಿಳಿಸಿದರು. ಪಾರ್ವತಮ್ಮನವರು ಇಲ್ಲಿ ಗಣಿಗಾರಿಕೆ ನಡೆಸಲು ತಮ್ಮ ಗ್ರಾಮದವರಿಂದ ಅಭ್ಯಂತರವಿಲ್ಲ ಎಂದು ತಿಳಿಸಿದರು. ಸುತ್ತಮುತ್ತಲಿನ ಗ್ರಾಮದ ಯುವಕರಿಕೆ ಆದ್ಯತೆ ಮೇರೆಗೆ ಉದ್ಯೋಗ ನೀಡುವಂತೆ ಮನವಿ ಮಾಡಿದರು. ರಾಜಪುರ ಗ್ರಾಮ ಪಂಚಾಯ್ತಿಗೆ ಒಳಪಡುವ ಎಲ್ಲಾ ಗ್ರಾಮಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡಬೇಕೆಂದು ತಿಳಿಸಿ ಸದರಿ ಗಣಿಗಾರಿಕೆ ಕಂಪನಿಗೆ ಅನುಮತಿ ನೀಡುವಂತೆ ಮನವಿ ಮಾಡಿದರು.

6) **ಶ್ರೀ ವೆಂಕಟೇಶ್ ರಾಜಪುರ ಗ್ರಾಮ**-ರವರು ಮಾತನಾಡುತ್ತಾ, ಸದರಿ ಮೈನಿಂಗ್ ಕಂಪನಿಯನ್ನು ಪ್ರಾರಂಭಿಸುವುದರಿಂದ ಅನುಕೂಲ ಮತ್ತು ಅನಾನುಕೂಲ ಎರಡು ಇವೆ ಎಂದರು. ಅನಾನುಕೂಲಗಳನ್ನು ಆದಷ್ಟು ಬೇಗ ಸರಿಪಡಿಸುವಂತೆ ಗಣಿ ಮಾಲೀಕರಲ್ಲಿ ವಿನಂತಿಸಿದರು. ಈಗ ವೇದಿಕೆಯಲ್ಲಿ ಸ್ಥಳಿಯರಿಗೆ ಉದ್ಯೋಗ ನೀಡುತ್ತೇವೆ ಎಂದು ಭರವಸೆಯನ್ನು ನೀಡುತ್ತಾರೆ ಆದರೆ ಮುಂದಿನ ದಿನಗಳ್ಲಿ ಭರವಸೆ ನೀಡಿದಂತೆ ಸ್ಥಳೀಯರಿಗೆ ಉದ್ಯೋಗ ನೀಡುವುದಿಲ್ಲ ಎಂದರು. ಆದಷ್ಟು ಸ್ಥಳಿಯರಿಗೆ ಉದ್ಯೋಗಾವಕಾಶಗಳನ್ನು ನೀಡುವಂತೆ, ಸಿ.ಎಸ್ ಅರ್ ಅನುದಾನದಲ್ಲಿ ಸ್ಥಳೀಯ ಗ್ರಾಮಗಳಿಗೆ ಅನುಕೂಲ ಮಾಡಿಕೊಡುವಂತೆ ಮನವಿ ಮಾಡಿದರು.

7) **ಶ್ರೀ ಧನಂಜಯ, ಉಬ್ಬಲಗುಂಡಿ ಗ್ರಾಮ**-ರವರು ಮಾತನಾಡುತ್ತಾ, ಪಾರ್ವತಮ್ಮ ಮೈನಿಂಗ್ ಪ್ರಾರಂಭಿಸುವುದರಿಂದ ತಮಗೆ ಯಾವುದೇ ತೊಂದರೆ ಇಲ್ಲ ಎಂದರು. ತಮ್ಮ ತಂದೆ ತಾಯಿ ಇದೇ ಮೈನಿಂಗ್ ನಲ್ಲಿ ದುಡಿದು ತಮ್ಮ ಜೀವನ ಕಟ್ಟಿಕೊಂಡಿರುವುದಾಗಿ ತೀಲಿಸಿದರು. ಮೈನಿಂಗ್ ಪ್ರಾರಂಭಿಸುವ ಮೊದಲು ಬೈಪಾಸ್ ರಸ್ತೆ ನಿರ್ಮಾಣ ಮಾಡಿ ಗಣಿಕಾರಿಕೆ ಪ್ರಾರಂಭಿಸುವಂತೆ ಮನವಿ ಮಾಡಿದರು. ತಮ್ಮ ಗ್ರಾಮದಲ್ಲಿ ಸುಮಾರು 600 ಮನೆಗಳಿದ್ದು ಆಸ್ಪತ್ರೆ ವ್ಯವಸ್ಥೆ ಇರುವುದಿಲ್ಲ. ಆದ್ದರಿಂದ ರಾಜಪುರ ಮತ್ತು ಉಬ್ಬಲಗುಂಡಿ ಗ್ರಾಮಸ್ಥರ ಆರೋಗ್ಯದ ಕಡೆ ಗಮನ ಹರಿಸುವಂತೆ ಕೋರಿದರು. ಗ್ರಾಮದ ಮಹಿಳೆಯರು, ಮಕ್ಕಳು & ವಯೋವೃದ್ದರ ಆರೋಗ್ಯ ಕಾಳಜಿ ಯನ್ನು ಮೈನಿಂಗ್ ಕಂಪನಿ ನೋಡಿಕೊಳ್ಳುವಂತೆ ಮನವಿ ಮಾಡಿದರು.

8) **ಶ್ರೀ, ಹೆಚ್ ಭರಮಪ್ಪ, ನಾರಯಣಪುರ ಗ್ರಾಮ**-ರವರು ಮಾತನಾಡುತ್ತಾ, ಸದರಿ ಗಣಿ ಪ್ರದೇಶವು ನಾರಯಣಪುರ ಗ್ರಾಮ ಪಂಚಾಯ್ತಿಯವರೆಗೂ ಬರುವುದರಿಂದ ಮೈನಿಂಗ್ ಕಂಪನಿಗೆ ನಾರಯಣಪುರ ಮೈನಿಂಗ್ ಎಂದು ಹೆಸರಿಡಬಹುದಾಗಿತ್ತು ಅದರ ಬದಲು ರಾಜಪುರ ಮೈನಿಂಗ್ ಕಂಪನಿ ಎಂಬುದಾಗಿ ಇಟ್ಟಿದ್ದಾರೆ ಎಂದರು ಇದರಿಂದ ತಮ್ಮ ಗ್ರಾಮಕ್ಕೆ ಯಾವುದೇ ಅನುದಾನ ಸಿಗುವುದಿಲ್ಲ ಎಂದರು.

9) **ಶ್ರೀ, ಕೆ. ಶರಣಪ್ಪ, ನಾರಯಣಪುರ ಗ್ರಾಮ**-ರವರು ಮಾತನಾಡುತ್ತಾ, ಈಗಾಗಲೇ ರಸ್ತೆಯಲ್ಲಿ ಸಂಚಾರ ದಟ್ಟಣೆ ಅಧಿಕವಾಗಿದೆ ಆದ್ದರಿಂದ ಬಹಳಷ್ಟು ತೊಂದರೆಯಾಗಿದೆ ಎಂದರು. ಅದಿರು ಸಾಗಿಸುವ ಲಾರಿಗಳನ್ನು ಸಾರ್ವಜನಿಕ ರಸ್ತೆಯಲ್ಲಿ ಸಂಚಾರ ಮಾಡದೇ ಗಣಿಕಾರಿಕೆಯ ಒಳಬಾಗದಲ್ಲಿ ಲಾರಿಗಳನ್ನು ಓಡಿಸುವಂತೆ ಮನವಿ ಮಾಡಿದರು.

10) **ಶ್ರೀ ಚಂದ್ರಶೇಕರಸ್ವಾಮಿ, ಯು.ರಾಜಪುರ ಗ್ರಾಮ**-ರವರು ಮಾತನಾಡುತ್ತಾ, ಇತ್ತೀಚಿನ ದಿನಗಳಲ್ಲಿ ಸುಪ್ರಿಂಕೋರ್ಟ ಆದೇಶದಂತೆ ಸಿ ಎಸ್ ಅರ್ ಅನುದಾನವನ್ನು ಬಳಸುವ ಬಗ್ಗೆ ಆದೇಶ ಬಂದಿದೆ. ಆದರೆ ಸದರಿ ಸುಪ್ರೀಂಕೋರ್ಟ ಆದೇಶ ನೀಡುವ ಪೂರ್ವದಲ್ಲಿಯೇ ಕೆ.ಎಂ,ಪಾರ್ವತಮ್ಮ ಗಣಿ ಕಂಪನಿಯುಯ ಸುತ್ತಮುತ್ತಲ ಗ್ರಾಮಗಳಿಗೆ ಅನುದಾನ ನೀಡಿ ಅಭಿವೃದ್ಧಿ ಮಾಡಿರುವುದಾಗಿ ತಿಳಿಸಿದರು. ಆಗಿನ ಕಾಲದಲ್ಲಿ ಸುತ್ತಮುತ್ತಲ ಗ್ರಾಮಗಳಿಗೆ ಸಾರಿಗೆ ವ್ಯವಸ್ಥೆ ಇರಲಿಲ್ಲ ಅಂತಹ ಸಮಯದಲ್ಲಿ ಗ್ರಾಮಸ್ಥರು ಯಾವುದಾದರು ಕಾರ್ಯಕ್ರಮಕ್ಕೆ ಸಾರಿಗೆ ವ್ಯವಸ್ಥೆ ಮಡುವಂತೆ ಗಣಿ ಕಂಪನಿಗೆ ಮನವಿ ನೀಡಿದರೆ ಕೂಡಲೇ ಲಾರಿಯನ್ನು ಕೊಟ್ಟು ಸಾರಿಗೆ ವ್ಯವಸ್ಥೆಯನ್ನು ಪಾರ್ವತಮ್ಮ ಗಣಿ ಕಂಪನಿಯು ಮಾಡಿರುವುದಾಗಿ ತೀಳಿಸಿದರು. ಮಾತೃ ಹೃದಯಿಯಾದ ಕೆಂಎಂ ಪಾರ್ವತಮ್ಮನವರು ಸ್ಥಳಿಯರ ಆರೋಗ್ಯದ ಬಗ್ಗೆ ಸಾಕಷ್ಟು ಕಾಳಜಿ ವಹಿಸಿರುವುದಾಗಿ ತಿಳಿಸಿದರು. ಮುಂದಿನ ದಿನಗಳಲ್ಲಿ ಹಿಂದಿಗಿಂತಲೂ ಹೆಚ್ಚಿನ ಸವಲತ್ತುಗಳನ್ನು ಸ್ಥಳೀಯರಿಗೆ ಮಾಡಿಕೊಡುತ್ತಾರೆ ಎನ್ನುವ ಆಶಾಭಾವನೆ ವ್ಯಕ್ತಪಡಿಸಿದರು.

11) **ಶ್ರೀ ವೀರೇಶಪ್ಪ ಉಬ್ಬಲಗುಂಡಿ ಗ್ರಾಮ**-ರವರು ಮಾತನಾಡುತ್ತಾ, ಕೆ.ಎಂ.ಪಾರ್ವತಮ್ಮನವರ ಗಣಿಕಂಪನಿಯಲ್ಲಿ ಉಬ್ಬಲಗುಂಡಿ ಮತ್ತು ರಾಜಪುರ ಗ್ರಾಮದವರು ಡ್ರೈವರ್, ಕ್ಲೀನರ್ ಗಳಾಗಿ ದುಡಿದು ಈಗ ಲಾರಿ ಮಾಲೀಕರಾಗಿ ಉನ್ನತಿ ಹೊಂದಿದ್ದಾರೆ ಎಂದು ತಿಳಿಸಿದರು. ಗ್ರಾಮದವರಿಗೆ ಅನಾರೋಗ್ಯ ಉಂಟಾದಾಗ ಗಣಿಲಾರಿಯ ಮೂಲಕ ಸಾರಿಗೆ ವ್ಯವಸ್ಥೆ ಮಾಡಿ ಗ್ರಾಮಸ್ಥರಿಗೆ ಸಹಾಯ ಮಾಡಿರುವುದಾಗಿ ತಿಳಿಸಿದರು. ಅಂತಹ ಹೃದಯವಂತರಿಗೆ ಗಣಿಕಾರಿಕೆ ನಡೆಸಲು ಅನುಕೂಲ ಮಾಡಿಕೊಡುವಂತೆ ಮನವಿ ಮಾಡಿದರು.

12) **ಶ್ರೀ ಬಾನೂರಪ್ಪ, ಉಬ್ಬಲಗುಂಡಿ ಗ್ರಾಮ**-ರವರು ಮಾತನಾಡುತ್ತಾ, 2004 ರಲ್ಲಿ ತಮ್ಮ ಗ್ರಾಮಕ್ಕೆ ಸಾರಿಗೆ ವ್ಯವಸ್ಥೆ ಇರಲಿಲ್ಲ. ಅಂತಹ ಸಮಯದಲ್ಲಿ ತಮ್ಮ ಪತ್ನಿಗೆ ಹೆರಿಗೆ ಸಮಯದಲ್ಲಿ ಗಣಿಲಾರಿಯನ್ನು ಒದಗಿಸಿ ಆಸ್ಪತ್ರೆಗೆ ಸಂಡೂರು ಪಟ್ಟಣಕ್ಕೆ ಕರೆದುಕೊಂಡು ಹೋಗಲು ಪಾರ್ವತಮ್ಮ ಗಣಿ ಮಾಲೀಕರು ಸಹಾಯ ಮಾಡಿರುವುದಾಗಿ ತಿಳಿಸಿದರು. ಸಹಾಯ ಮಾಡಿದ ಪಾರ್ವತಮ್ಮನವರ ಋಣವನ್ನು ತೀರಿಸಲು ಸಾದ್ಯವಿಲ್ಲ ಎಂದು ತಿಳಿಸಿದರು.

13) **ಶ್ರೀ ನಾಗೇಂದ್ರ, ರಾಜಪುರ ಗ್ರಾಮ**- ರವರು ಮಾತಾನಾಡುತ್ತಾ ಸದರಿ ಮೈನಿಂಗ್ ಕಂಪನಿಯಲ್ಲಿ ಕೆಲದ ಮಾಡಿರುವುದಾಗಿ ತಿಳಿಸಿದರು. ತಾವು ವಿದ್ಯಾರ್ಥಿ ಯಾಗಿದ್ದಾಗ ಕಬ್ಬಡ್ಡಿ ಕ್ರೀಡೆಗಾಗಿ ಸಂಡೂರಿಗೆ ತೆರಳಲು ಸಾರಿಗೆ ವ್ಯವಸ್ಥೆ ಇರಲಿಲ್ಲ ಅಂತಹ ಸಮಯದಲ್ಲಿ ಗಣಿಗಾರಿಕೆ ಲಾರಿಯನ್ನು ತಮಗೆ ಕೊಟ್ಟು ಕ್ರೀಡೆಯಲ್ಲಿ ಭಾಗವಹಿಸಲು ಗಣಿ ಮಾಲೀಕರು ಸಹಾಯ ಮಾಡಿ ರುವುದಾಗಿ ತಿಳಿಸಿದರು. ಮೈನಿಂಗ್ ಪ್ರಾರಂಭಿಸಲು ಅನುಮತಿ ನೀಡುವಂತೆ ಮನವಿ ಮಾಡಿದರು.

14) **ಶ್ರೀ ಸುಬಾನ್ ಸಾಬ್ ಕೃಷ್ಣ ನಗರ ಗ್ರಾಮ ರವರು ಮಾತನಾಡುತ್ತಾ ತಾವು ಮೈನಿಂಗ್ ಪರ ಇರುವುದಾಗಿ ತಿಳಿಸಿದರು.** ಲಾರಿ ಮಾಲೀಕರಿಗೆ ಗಣಿ ಕಂಪನಿಯ ವತಿಯಿಂದ ಬೆಂಬಲ ಬೆಲೆ ನೀಡುವಂತೆ ಮನವಿ ಮಾಡಿದರು. ಸ್ಥಳೀಯರಿಗೆ ಅದಿರನ್ನು ಸಾಗಿಸಲು ಟ್ರಾನ್ಸಪೋರ್ಟಗೆ ಅದ್ಯತೆ ನೀಡುವಂತೆ ಮನವಿ ಮಾಡಿದರು.

15) **ಶ್ರೀ ನಾಗೇಶ್, ಯು.ಮಲ್ಲಾಪುರ ಗ್ರಾಮ**- ರವರು ಮಾತಾನಾಡುತ್ತಾ ತಮ್ಮದು ಚಿಕ್ಕ ಗ್ರಾಮವಾಗಿದ್ದು ರಾಜಾಪುರ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿದ್ದು ಗಣಿ ಪ್ರದೇಶದಿಂದ ಕೇವಲ 5 ಕಿ.ಮೀ ವ್ಯಾಪ್ತಿಯಲಿದ್ದರೂ ಸಹ ಗಣಿ ಕಂಪನಿಯವರು ತಮ್ಮ ಗ್ರಾಮವನ್ನು ಕಡೆಗಣಿಸುತ್ತಿರುವುದಾಗಿ ತಿಳಿಸಿದರು. ತಮ್ಮ ಗ್ರಾಮಕ್ಕೆ ಗಣಿ ಕಂಪನಿಯಿಂದ ಯಾವುದೇ ಅಭಿವೃದ್ಧಿ ಮಾಡಿಲ್ಲ ಎಂದರು. ಮೈನಿಂಗ್ ಲಾರಿಗಳು ಸಂಚರಿಸುವ ರಸ್ತೆಯ ಅಕ್ಕಪಕ್ಕದಲ್ಲಿ ಗಿಡಗಳನ್ನು ನೆಟ್ಟು ಧೂಳನ್ನು ನಿಯಂತ್ರಿಸುವಂತೆ ಮನವಿ ಮಾಡಿದರು. ಪರಿಸರವನ್ನು ಕಾಪಡುವಂತೆ ಗ್ರಾಮಕ್ಕೆ ಅಭಿವೃದ್ಧಿ ಕಾರ್ಯಗಳನ್ನು ಮಾಡುವಂತೆ ಗಣಿ ಮಾಲೀಕರಿಗೆ ವಿನಂತಿಸಿದರು.

16) **ಶ್ರೀ ರಾಮಕೃಷ್ಣ ಹೆಗಡೆ, ಸ್ವಾಮಿಹಳ್ಳಿ ಗ್ರಾಮ, ಕರ್ನಾಟಕ ದಲಿತ ಸಂಘರ್ಷ ಸಮಿತಿ ತಾಲ್ಲೂಕು ಅಧ್ಯಕ್ಷರು**- ರವರು ಮಾತನಾಡುತ್ತಾ, ಸದರಿ ಗಣಿ ಕಂಪನಿಯು ಕೇವಲ ಒಂದು ವರ್ಷದ ಮೈನಿಂಗ್ ಆಗಿರುವುದರಿಂದ ಬೈಪಾಸ್ ರಸ್ತೆ ನಿರ್ಮಾಣ ಕೇವಲ ಇದೊಂದೆ ಗಣಿ ಕಂಪನಿಯಿಂದ ಸಾಧ್ಯವಿಲ್ಲ ಎಂದರು. ಬೈಪಾಸ್ ರಸ್ತೆ ನಿರ್ಮಾಣಕ್ಕೆ ಸಂಬಂದಿಸಿದಂತೆ ತಾವು ಹಲವಾರು ಬಾರಿ ಹೋರಾಟ ಮಾಡಿರುವುದಾಗಿ ತಿಳಿಸಿ, ಬೈಪಾಸ್ ರಸ್ತೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಈ ಭಾಗದಲ್ಲಿ ಬೃಹತ್ ಮೈನಿಂಗ್ ಕಂಪನಿಗಳೊಂದಿಗೆ ಚರ್ಚಿಸಿ ರಸ್ತೆ ನಿರ್ಮಿಸುವಂತೆ ಮನವಿ ಮಾಡಿದರು. ಸ್ಥಳೀಯ ವಿಧ್ಯಾವಂತ ಯುವಕರಿಗೆ ಅವರ ವಿದ್ಯಾರ್ಹತೆ ಅನುಗುಣವಾಗಿ ಮೈನಿಂಗ್ ಕಂಪನಿಯಲ್ಲಿ ಉದ್ಯೋಗ ನೀಡುವಂತೆ ಮನವಿ ಮಾಡಿದರು. ಬೇರೆ ಭಾಗದಿಂದ ಬಂದವರಿಗೆ ಗಣಿ ಕಂಪನಿಯಲ್ಲಿ ಉನ್ನತ ಹುದ್ದೆ ನೀಡಿ ಸ್ಥಳೀಯರಿಗೆ ಕಾವಲುಗಾರ ಮತ್ತು ಇತರೆ ಕೆಳದರ್ಜೆಯ ಹುದ್ದೆಗಳನ್ನು ನೀಡದಂತೆ ಮನವಿ ಮಾಡಿದರು. ಸಂಘಟನೆ ವತಿಯಿಂದ ಸದರಿ ಮೈನಿಂಗ್ ಕಂಪನಿಗೆ ಮೈನಿಂಗ್ ನಡೆಸಲು ಸಹಮತ ಇರುವುದಾಗಿ ತಿಳಿಸಿದರು.

17) **ಶ್ರೀ ರಾಜು, ಕರ್ನಾಟಕ ರಕ್ಷಣಾ ವೇದಿಕೆ, ಅಧ್ಯಕ್ಷರು, ಸಂಡೂರು** – ರವರು ಮಾತನಾಡುತ್ತಾ, ಸದರಿ ಸಭೆಯ ತಮ್ಮ 251 ನೇ ಸಾರ್ವಜನಿಕೆ ಆಲಿಕೆ ಸಭೆ ಎಂದು ಸಭೆಗೆ ತಿಳಿಸಿದರು. ಸ್ಥಳೀಯರು ಪಾರ್ವತಮ್ಮ ಮೈನಿಂಗ್ ಕಂಪನಿ ಬೇಕು ಎಂದು ಅಭಿಪ್ರಾಯ ಪಟ್ಟಿದ್ದು ತಾವು ಸಹ ಸದರಿ ಗಣಿ ಕಂಪನಿಯ ಪರ ಇರುವುದಾಗಿ ತಿಳಿಸಿದರು. ಬೈಪಾಸ್ ರಸ್ತೆ ನಿರ್ಮಾಣ ಮಾಡುವಂತೆ ಕೋರಿದರು. ಅದಿರನ್ನು ಸಾಗಿಸುವ ರಸ್ತೆಯನ್ನು ಸರಿಪಡಿಸುವಂತೆ ಹಾಗೂ ಸ್ಥಳೀಯರಿಗೆ ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗ ನೀಡುವಂತೆ ಮನವಿ ಮಾಡಿದರು.

18) **ಶ್ರೀ ವೀರಭದ್ರಪ್ಪ, ಉಬ್ಬಲಗುಂಡಿ ಗ್ರಾಮ** – ರವರು ಮಾತನಾಡುತ್ತಾ, ಸದರಿ ಗಣಿ ಕಂಪನಿಯು ಪ್ರಾರಂಭವಾದಾಗ ತಾವು ಕೆಲಸ ಮಾಡಿರುವುದಾಗಿ ತಿಳಿಸಿ ಪುನ: ಪ್ರಾರಂಭವಾದಾಗ ತಮ್ಮನ್ನು ಮತ್ತೆ ಕೆಲಸಕ್ಕೆ ಸೇರಿಸಿಕೊಳ್ಳುವಂತೆ ಮನವಿ ಮಾಡಿದರು.

19) **ಶ್ರೀ ಸುಬ್ಬಣ್ಣ, ನಾರಾಯಣಪುರ ಗ್ರಾಮ** – ಸಂಡೂರು ತಾಲ್ಲೂಕು ದಲಿತ ಸಂಘರ್ಷ ಸಮಿತಿ ಸಂಘಟನಾ ಸಂಚಾಲಕರು-ರವರು ಮಾತನಾಡುತ್ತಾ, ತಾವು ಪಾರ್ವತಮ್ಮ ಮೈನಿಂಗ್ ಕಂಪನಿಯನ್ನು ಚಿಕ್ಕಂದಿನಿಂದಲೂ ನೋಡಿ ಬೆಳೆದಿರುವುದಾಗಿ ತಿಳಿಸಿದರು. ಆಗಿನ ಕಾಲದಿಂದಲೂ ಪಾರ್ವತಮ್ಮ ಮೈನಿಂಗ್ ಕಂಪನಿ ಸ್ಥಳೀಯರಿಗೆ ಒಳ್ಳೆಯ ಕೆಲಸಗಳನ್ನು ಮಾಡಿರುವುದಾಗಿ ತಿಳಿಸಿದರು. ಆದ್ದರಿಂದ ಗಣಿಗಾರಿಕೆ ನಡೆಸಲು ಅನುಮತಿ ನೀಡುವಂತೆ ಮನವಿ ಮಾಡಿದರು.

20) **ಶ್ರೀ ಎಂ. ಸತೀಶ್, ಪರಿಸರ ಸಂರಕ್ಷಣಾ ವೇದಿಕೆ, ಸಂಡೂರು** – ರವರು ಮಾತನಾಡುತ್ತಾ, ಸದರಿ ಮೈನಿಂಗ್ ಕಂಪನಿಯನ್ನು ಪ್ರಾರಂಭಿಸಲು ತಮ್ಮ ಅಭ್ಯಂತರವಿಲ್ಲ ಎಂದರು. ಸದರಿ ಮೈನಿಂಗ್ ಕಂಪನಿಯ ವಾರ್ಷಿಕ ಉತ್ಪಾದನೆ 43000 ಟನ್‌ಗಳಿದ್ದು ಕೇವಲ ಒಂದು ವರ್ಷಕ್ಕೆ ಸೀಮಿತವಾಗಿರುವುದರಿಂದ ಅನುಮತಿಯನ್ನು ನೀಡಬಹುದು ಎಂದರು. ಹಳೇ ಕಾರ್ಮಿಕರಿಗೆ ಉದ್ಯೋಗ ನೀಡುವಂತೆ ಮನವಿ ಮಾಡಿದರು. ಬೈಪಾಸ್ ರಸ್ತೆ ಕೇವಲ ಪಾರ್ವತಮ್ಮ ಮೈನಿಂಗ್‌ಗೆ ಸಂಬಂಧ ಪಟ್ಟಿದ್ದಲ್ಲ ಈ ಭಾಗದಲ್ಲಿರುವ ಇತರೆ ಮೈನಿಂಗ್ ಕಂಪನಿಗಳು ಸಹ ಬೈಪಾಸ್ ರಸ್ತೆ ನಿರ್ಮಾಣ ಮತ್ತು ನಿರ್ವಹಣೆಯ ಬಗ್ಗೆ ಹೊಣೆಹೊರಬೇಕಾಗುತ್ತದೆ ಎಂದರು. ಸುತ್ತಮುತ್ತಲ ಪರಿಸರವನ್ನು ಸಂರಕ್ಷಿಸುವಂತೆ ಕೋರಿದರು. ಸದರಿ ಯೋಜನೆಗೆ ತಮ್ಮ ಒಪ್ಪಿಗೆ ಸೂಚಿಸಿದರು.

21) **ಶ್ರೀ ರವಿ, ಸಂಡೂರು**–ರವರು ಮಾತನಾಡುತ್ತಾ, ಸ್ಥಳೀಯರಿಗೆ ಮೈನಿಂಗ್ ಕಂಪನಿಯಲ್ಲಿ ಉದ್ಯೋಗ ನೀಡುವಂತೆ ಗಣಿ ಮಾಲೀಕರಲ್ಲಿ ಮನವಿ ಮಾಡಿದರು. ಸದರಿ ಗಣಿಗಾರಿಕೆಗೆ ಅನುಮತಿ ನೀಡುವಂತೆ ಕೋರಿದರು.

22) **ಶ್ರೀ ಪಂಪಯ್ಯ ಸ್ವಾಮಿ, ಯು. ರಾಜಾಪುರ ಗ್ರಾಮ**– ರವರು ಮಾತನಾಡುತ್ತಾ, ಪಾರ್ವತಮ್ಮ ಮೈನಿಂಗ್ ಕಂಪನಿಯಲ್ಲಿ ಈ ಹಿಂದೆ ಕೆಲಸ ಮಾಡಿದ ಅರ್ಧದಷ್ಟು ಜನ ಪ್ರಸ್ತುತ ನಡೆಯುತ್ತಿರುವ ಸಭೆಯಲ್ಲಿ ಹಾಜರಿರುವುದಾಗಿ ತಿಳಿಸಿದರು. ಸುತ್ತಮುತ್ತಲು ಗ್ರಾಮಗಳಿಗೆ ಸರಿಯಾದ ಸಾರಿಗೆ ವ್ಯವಸ್ಥೆ ಕಲ್ಪಿಸುವಂತೆ ಮನವಿ ಮಾಡಿದರು. ಸಿ.ಎಸ್.ಆರ್. ಅನುಧಾನದಡಿಯಲ್ಲಿ ಬಸ್ ವ್ಯವಸ್ಥೆ ಒದಗಿಸಲು ಕೋರಿದರು. ಶೈಕ್ಷಣಿಕವಾಗಿ ಸಂಡೂರು ಭಾಗ ಹಿಂದೆ ಉಳಿದಿದ್ದು ಮುಂದಿನ 2022-23 ಸಾಲಿನಲ್ಲಿ ಕಾಲೇಜ್‌ನ ವ್ಯವಸ್ಥೆಯನ್ನು ಈ ಭಾಗದಲ್ಲಿ ಮಾಡಿಕೊಡುವಂತೆ ಅಧಿಕಾರಿಗಳಿಗೆ ಮನವಿ ಮಾಡಿದರು.

23) **ಶ್ರೀ ಹೊನ್ನಳ್ಳಪ್ಪ, ಕರ್ನಾಟಕ ರಿಪಬ್ಲಿಕ್ ಸೇನೆ, ಬಳ್ಳಾರಿ ಜಿಲ್ಲಾಧ್ಯಕ್ಷರು**– ರವರು ಮಾತನಾಡುತ್ತಾ, ಗ್ರಾಮಸ್ಥರ ಕೋರಿಕೆಯಂತೆ ಪಾರ್ವತಮ್ಮ ಮೈನಿಂಗ್ ಕಂಪನಿಗೆ ಗಣಿಗಾರಿಕೆಗೆ ಅವಕಾಶ ನೀಡುವಂತೆ ಮನವಿ ಮಾಡಿದರು.

24) **ಶ್ರೀ. ಕೆ.ಪಿ. ವೀರೇಶ್, ಉಬ್ಬಲಗುಂಡಿ ಗ್ರಾಮ**–ರವರು ಮಾತನಾಡುತ್ತಾ, ಕೆ.ಎಮ್. ಪಾರ್ವತಮ್ಮ ಮೈನಿಂಗ್ ಕಂಪನಿಗೆ ತಮ್ಮ ಅಭ್ಯಂತರವಿಲ್ಲ ಎಂದರು. ಸ್ಥಳೀಯರಿಗೆ ಉದ್ಯೋಗ ವ್ಯವಸ್ಥೆ ಮಾಡುವಂತೆ ಕೋರಿದರು. ಉಬ್ಬಲಗುಂಡಿ ಆಸ್ಪತ್ರೆಯಲ್ಲಿ ವೈದ್ಯರ ವ್ಯವಸ್ಥೆ ಮಾಡುವಂತೆ ಮನವಿ ಮಾಡಿದರು. ಬೈಪಾಸ್ ರಸ್ತೆ ನಿರ್ಮಾಣ ಮಾಡುವಂತೆ ಮನವಿ ಮಾಡಿದರು.

25) **ಶ್ರೀ ಬಸ್ಸಪ್ಪರಾವ್, ಉಬ್ಬಲಗುಂಡಿ ಗ್ರಾಮ**– ರವರು ಮಾತನಾಡುತ್ತಾ, ಉಬ್ಬಲಗುಂಡಿ ಗ್ರಾಮಕ್ಕೆ ಸದರಿ ಮೈನಿಂಗ್ ಕಂಪನಿಯ ಮಾಲೀಕರು ಎಲ್ಲಾ ಸೌಲಭ್ಯಗಳನ್ನು ಒದಗಿಸಿರುವುದರಿಂದ ಮೈನಿಂಗ್ ನಡೆಸಲು ತಮ್ಮ ಅಭ್ಯಂತರವಿಲ್ಲ ಎಂದರು. ಜಿಂದಾಲ್ ಕಂಪನಿಯವರು ಬೈಪಾಸ್ ರಸ್ತೆ ನಿರ್ಮಾಣ ಮಾಡಿಕೊಡುವುದಾಗಿ ಭರವಸೆ ನೀಡಿ ಇದುವರೆಗೂ ಬೈಪಾಸ್ ರಸ್ತೆ ನಿರ್ಮಿಸಿರುವುದಿಲ್ಲ ಎಂದರು. ಕೂಡಲೇ ಬೈಪಾಸ್ ರಸ್ತೆ ನಿರ್ಮಾಣ ಮಾಡುವುದರ ಮೂಲಕ ಧೂಳನ್ನು ನಿಯಂತ್ರಿಸುವಂತೆ ಮನವಿ ಮಾಡಿದರು.

26) **ಶ್ರೀ ಪಂಪಾಪತಿ, ರಾಜಾಪುರ ಗ್ರಾಮ**- ರವರು ಮಾತನಾಡುತ್ತಾ- ಸದರಿ ಪಾರ್ವತಮ್ಮ ಮೈನಿಂಗ್ ಕಂಪನಿಯಿಂದ ಯಾವುದೇ ತೊಂದರೆ ಇಲ್ಲ ಎಂದರು. ಮೈನಿಂಗ್ ನಡೆಸಲು ಅನುಮತಿ ನೀಡುವಂತೆ ಮನವಿ ಮಾಡಿದರು.

ಕೊನೆಯಲ್ಲಿ ಸಾರ್ವಜನಿಕ ಆಲಿಕೆ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ), ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರು ತಮ್ಮ ಅಧ್ಯಕ್ಷೀಯ ಮಾತುಗಳನ್ನಾಡುತ್ತ, ಸದರಿ ಸಭೆಯು ಪರಿಸರ ಸಾರ್ವಜನಿಕ ಸಭೆಯಾಗಿದ್ದು, ಇದರಲ್ಲಿ ಎಲ್ಲರಿಗೂ ಮಾತನಾಡಲು ಮುಕ್ತ ಅವಕಾಶವನ್ನು ಕಲ್ಪಿಸಲಾಗಿದೆ. ಹಾಗು ತಾವು ಮಾತನಾಡಿದ ಪರ/ವಿರೋಧ ಅಭಿಪ್ರಾಯಗಳನ್ನ ದಾಖಲಿಸಲಾಗಿದೆ. ಈ ಸಭೆಯಲ್ಲಿ ನಾವುಗಳು ಯಾವುದೇ ತಿರ್ಮಾನ ತೆಗೆದುಕೊಳ್ಳುವದಿಲ್ಲ, ಈ ಸಭೆಯ ಉದ್ದೇಶ ಸಾರ್ವಜನಿಕರ ಅಭಿಪ್ರಾಯ ಹಾಗೂ ಸಲ್ಲಿಸಿರುವ ಮೌಖಿಕ ಮತ್ತು ಲಿಖಿತ ಅಭಿಪ್ರಾಯಗಳನ್ನು ಸಂಗ್ರಹಿಸಿ, ಹಾಗೂ ತಾವುಗಳು ಸಲ್ಲಿಸಿರುವ ಮನವಿಗಳು, ಹೆಚ್ಚಿನ ಸಂಖ್ಯೆಯ ಲಿಖಿತ ಅಭಿಪ್ರಾಯಗಳು/ ಸಲಹೆಗಳು/ಆಕ್ಷೇಪಣೆಗಳನ್ನು ಸ್ವೀಕರಿಸಿದ್ದೇವೆ. ಅದನ್ನು ದಾಖಲಿಸಲಾಗುವುದು. ಈ ಸಭೆಯ ನಡವಳಿಯನ್ನು ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ದಾಖಲಿಸಿ, ಛಾಯಾಚಿತ್ರಗಳ (ಪ್ರತಿಯನ್ನು **ಅನುಬಂಧ-7** ರಲ್ಲಿ ಲಗತ್ತಿಸಲಾಗಿದೆ) ವಿಡಿಯೋ ಇರುವ ಸಿ.ಡಿ. ಗಳ (ಪ್ರತಿಯನ್ನು **ಅನುಬಂಧ-8** ರಲ್ಲಿ ಲಗತ್ತಿಸಲಾಗಿದೆ) ಇದನ್ನು ರಾಜ್ಯ ಮಟ್ಟದ ಪರಿಸರ ಅಘಾತ ಅಧ್ಯಯನ ಪ್ರಾಧಿಕಾರ, ಅರಣ್ಯ, ಜೀವಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು. ಇವರಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಕೇಂದ್ರ ಕಛೇರಿ ಬೆಂಗಳೂರು ರವರ ಮುಖಾಂತರ ಕಳುಹಿಸಿಕೊಡಲಾಗುವದು ಎಂದು ತಿಳಿಸಿದರು.

ಈ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡ ಎಲ್ಲಾ ಸಾರ್ವಜನಿಕರಿಗೆ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರಿಗೆ ಧನ್ಯವಾದಗಳನ್ನು ತಿಳಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಿದರು.

**ಡಾ.ದೊಡ್ಡಶಾನಯ್ಯ**
ಹಿರಿಯ ಪರಿಸರ ಅಧಿಕಾರಿ(ಪ್ರಭಾರ)
ಕ.ರಾ.ಮಾ.ನಿ.ಮಂ.ವಲಯ ಕಛೇರಿ

**ಶ್ರೀ ಪಿ.ಎಸ್.ಮಂಜುನಾಥ,ಕ.ಆ.ಸೇ(ಹಿರಿಯ ಶ್ರೇಣಿ)**
ಅಪರ ಜಿಲ್ಲಾಧಿಕಾರಿಗಳು ಹಾಗೂ
ಬಳ್ಳಾರಿ ಅಪರ ಜಿಲ್ಲಾ ದಂಡಾಧಿಕಾರಿಗಳು, ಅಧ್ಯಕ್ಷರು
ಜಿಲ್ಲಾ ಪರಿಸರ ಸಾರ್ವಜನಿಕ ಆಲಿಕೆ
ಸಮಿತಿ, ಬಳ್ಳಾರಿ.

# ಅನುಬಂಧ

1. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಅಧಿಕಾರಿಗಳ ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ–1** ರಲ್ಲಿ ಲಗತ್ತಿಸಲಾಗಿದೆ.

2. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಸಾರ್ವಜನಿಕರ ವಿಳಾಸ ಮತ್ತು ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ–2** ರಲ್ಲಿ ಲಗತ್ತಿಸಲಾಗಿದೆ.

3. ರಾಜ್ಯ ಮಟ್ಟದ ಪ್ರಮುಖ ದಿನ ಪತ್ರಿಕೆಗಳಾದ ವಿಜಯವಾಣಿ (ಕನ್ನಡ) ಹಾಗೂ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ (ಆಂಗ್ಲ) ಗಳಲ್ಲಿ ದಿನಾಂಕ 08-03-2022 ರಂದು ಪತ್ರಿಕಾ ಪ್ರಕಟಣೆ ಬಳ್ಳಾರಿ ಜಿಲ್ಲೆಯ ಸ್ಥಳೀಯ ದಿನಪತ್ರಿಕೆಯಾದ "ಈ ನಮ್ಮ ಕನ್ನಡ ನಾಡು" ಪತ್ರಿಕೆಯಲ್ಲಿ ದಿನಾಂಕ: 09-03-2022 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ ಕುರಿತಾದ ಪ್ರಕಟಣೆಯ ಪ್ರತಿಯನ್ನು **ಅನುಬಂಧ–3** ರಲ್ಲಿ ಲಗತ್ತಿಸಲಾಗಿದೆ.

4. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಪ್ರಚಾರಕ್ಕಾಗಿ ದಿನಾಂಕ 07-04-2022 ರಂದು ಕರಪತ್ರಗಳನ್ನು ವಿತರಿಸಲಾದ ಮತ್ತು ಧ್ವನಿವರ್ಧಕಗಳ ಮುಖೇನ ಯೋಜನಾ ಸ್ಥಳದ ಸುತ್ತಮುತ್ತಲ ಗ್ರಾಮಗಳಲ್ಲಿ ಸಾರ್ವಜನಿಕವಾಗಿ ಪ್ರಚಾರ ಮಾಡಲಾದ ಸಮಯದಲ್ಲಿ ತೆಗೆದುಕೊಂಡ ಛಾಯಾಚಿತ್ರಗಳ ಪ್ರತಿಯನ್ನು **ಅನುಬಂಧ–4** ರಲ್ಲಿ ಲಗತ್ತಿಸಲಾಗಿದೆ.

5. ಮಾನ್ಯ ಜಿಲ್ಲಾಧಿಕಾರಿಗಳು, ಬಳ್ಳಾರಿ ರವರ ಅಧಿಕೃತ ಜ್ಞಾಪನಾ ಪತ್ರದ ದಿನಾಂಕ 05-04-2022 ರ ಅನ್ವಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರಿಗೆ ಅಧಿಕಾರ ನೀಡಿ ದಿನಾಂಕ : 08-04-2022 ರಂದು ನಡೆಯುವ ಪರಿಸರ ಆಲಿಕೆ ಸಭೆಯನ್ನು ನಡೆಸಲು ಆದೇಶಿಸಿರುತ್ತಾರೆ. ಸದರಿ ಜ್ಞಾಪನಾ ಪತ್ರದ ಪ್ರತಿಯನ್ನು **ಅನುಬಂಧ–5** ರಂತೆ ಲಗತ್ತಿಸಿದೆ.

6. ಸಾರ್ವಜನಿಕರಿಂದ ಪ್ರಾದೇಶಿಕ ಕಛೇರಿ ಬಳ್ಳಾರಿಯಲ್ಲಿ ಸ್ವೀಕೃತಿಯಾದ ಒಟ್ಟು 03 ಲಿಖಿತ ಹೇಳಿಕೆ/ ಆಕ್ಷೇಪಣೆಗಳು ಸ್ವೀಕೃತಿಯಾಗಿದ್ದು, ಪರಿಸರ ಸಾರ್ವಜನಿಕ ಸಭೆಯ ಸಮಯದಲ್ಲಿ ಒಟ್ಟು 46 ಲಿಖಿತ ಹೇಳಿಕೆ/ ಆಕ್ಷೇಪಣೆಗಳುಸ್ವೀಕೃತಿಯಾಗಿರಯತ್ತವೆ ಅವುಗಳನ್ನು **ಅನುಬಂಧ–6** ರಲ್ಲಿ ಲಗತ್ತಿಸಲಾಗಿದೆ.

7. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಪ್ರಕ್ರಿಯೆಯ ಛಾಯಾಚಿತ್ರಗಳ ಪ್ರತಿಯನ್ನು **ಅನುಬಂಧ–7** ರಲ್ಲಿ ಲಗತ್ತಿಸಲಾಗಿದೆ.

8. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಆಡಿಯೋ ಮತ್ತು ವಿಡಿಯೋ ಇರುವ ಸಿ.ಡಿ. ಗಳ ಪ್ರತಿಯನ್ನು **ಅನುಬಂಧ–8** ರಲ್ಲಿ ಲಗತ್ತಿಸಲಾಗಿದೆ.

**ಡಾ.ದೊಡ್ಡಶಾನಯ್ಯ**
ಹಿರಿಯ ಪರಿಸರ ಅಧಿಕಾರಿ(ಪ್ರಭಾರ)
ಕ.ರಾ.ಮಾ.ನಿ.ಮಂ.ವಲಯ ಕಛೇರಿ

**ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ)**
ಅಪರ ಜಿಲ್ಲಾಧಿಕಾರಿಗಳು ಹಾಗೂ
ಬಳ್ಳಾರಿ ಅಪರ ಜಿಲ್ಲಾ ದಂಡಾಧಿಕಾರಿಗಳು, ಅಧ್ಯಕ್ಷರು
ಜಿಲ್ಲಾ ಪರಿಸರ ಸಾರ್ವಜನಿಕ ಆಲಿಕೆ
ಸಮಿತಿ, ಬಳ್ಳಾರಿ.